# ದಿನಾಂಕ: 09/03/2022 ರ ನೋಡಲ್ ಅಧಿಕಾರಿ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಂಖ್ಯೆ–135 ಪಾದರಾಯನಪುರ ವಾರ್ಡಿನ ವಾರ್ಡ್ ಸಮಿತಿ ಸಭೆಯ ನಡವಳಿಗಳು

| ಸಭೆಯಲ್ಲಿ ಹಾಜರಿದ್ದ ಅಧಿಕಾರಿಗಳ ಮತ್ತು ಸದಸ್ಯರುಗಳ ವಿವರಗಳು: | | | ಗೈರು ಹಾಜರಿದ್ದ ಇಲಾಖೆ ಸಿಬ್ಬಂಧಿಗಳು |
|---|---|---|---|
| ಕ್ರ.ಸಂ. | ಅಧಿಕಾರಿ/ ನೌಕರರ ಹೆಸರು | ಪದನಾಮ | |
| 1 | ಶ್ರೀ. ರವಿಕುಮಾರ್ | ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿ | BESCOM |
| 2 | ಶ್ರೀ. ಎಂ.ಎಸ್. ಉಮೇಶ್ | ಸಂಚಾಲಕರು ಮತ್ತು ಸಹಾಯಕ ಅಭಿಯಂತರರು, ವಾರ್ಡ್ ಸಂಖ್ಯೆ–135 | SWM |
| 3 | ಶ್ರೀ. ಮುತ್ಯಾಲು | ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ಸಂಖ್ಯೆ: 135 | ಕಂದಾಯ ಇಲಾಖೆ |
| 4 | ಶ್ರೀಮತಿ. ಚಂದ್ರಶೇಖರ್.ಎನ್ | ಕಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ಸಂಖ್ಯೆ: 135 | |
| 5 | ಶ್ರೀ. ಪಿ. ಮಂಜುನಾಥ | ಸ.ಕಾ.ನಿ.ಅ (ವಿದ್ಯುತ್) | |
| 6 | ಶ್ರೀ. ಮಂಜುನಾಥ್ | ಇನ್ಸ್‌ಪೆಕ್ಟರ್, ಬಿ.ಡಬ್ಲ್ಯೂ.ಎಸ್.ಎಸ್.ಬಿ | |
| 7 | ಶ್ರೀ. ಚಿದಾನಂದ | ಹೆಡ್ ಕಾನ್ಸ್‌ಟೇಬಲ್, ಜೆಜೆಆರ್‌ನಗರ ಪೊಲೀಸ್ ಠಾಣೆ | |
| 8 | ಶ್ರೀ. ಶ್ರೀನಿವಾಸ ಜಿ | ಹೆಡ್ ಕಾನ್ಸ್‌ಟೇಬಲ್, ಜೆಜೆಆರ್‌ನಗರ ಪೊಲೀಸ್ ಠಾಣೆ | |
| 9 | ಶ್ರೀ. ಭಾರ್ಗವ್ ಎಸ್ | ಮಾರ್ಷಲ್ | |
| 10 | ಶ್ರೀ. ಪ್ರಕಾಶ್ | ವಾರ್ಡ್ ಸದಸ್ಯರು | |
| 11 | ಶ್ರೀ. ಸಯ್ಯದ್ | ವಾರ್ಡ್ ಸದಸ್ಯರು | |
| 12 | ಶ್ರೀ. ಕೈಜರ್ ಅಲಾಮ್ | ವಾರ್ಡ್ ಸದಸ್ಯರು | |
| 13 | ಶ್ರೀಮತಿ.ಅಸ್ಮಾ | ವಾರ್ಡ್ ಸದಸ್ಯರು | |

ವಾರ್ಡ್ ಸಮಿತಿಯ ಉದ್ದೇಶ ಮತ್ತು ಸಭೆಯ ಮಹತ್ವವನ್ನು ತಿಳಿಸಿ ಸಭೆಯಲ್ಲಿ ಉಪಸ್ಥಿತರಿದ್ದ ಅಧ್ಯಕ್ಷರು, ಸದಸ್ಯರು ಹಾಗೂ ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿ ಸಭೆಯನ್ನು ಪ್ರಾರಂಭಿಸಲಾಯಿತು.

1. ಹಿಂದಿನ ಸಭೆಯ ನಡವಳಿಗಳಲ್ಲಿದ್ದ ವಿಷಯಕ್ಕೆ ತೆಗೆದುಕೊಂಡ ಕ್ರಮದ ಬಗ್ಗೆ ಓದಿ ರೆಕಾರ್ಡ್ ಮಾಡಲಾಯಿತು. ದಾಖಲಿಸಲಾದ ವಿಷಯಗಳಲ್ಲಿ ಬಾಕಿ ಉಳಿದಿರುವ ಕೆಲಸ ಕಾರ್ಯಗಳನ್ನು ಜರೂರಾಗಿ ಕ್ರಮವಹಿಸುವಂತೆ ಸಂಬಂಧಿಸಿದವರಿಗೆ ಸೂಚಿಸಲಾಯಿತು.
2. **ಇಂದಿನ ಸಭೆಯಲ್ಲಿ ಮಾನ್ಯ ಅಧ್ಯಕ್ಷರ ಸಮ್ಮುಖದಲ್ಲಿ ಚರ್ಚಿಸಿದ ವಿಷಯಗಳು:**

| ಕ್ರ ಸಂ | ವಿಷಯಗಳು | ನಿರ್ಣಯ | ಕ್ರಮ ತೆಗೆದುಕೊಳ್ಳಬೇಕಾದ ಅಧಿಕಾರಿ |
|---|---|---|---|
| 1 | ಘನತ್ಯಾಜ್ಯ ವಿಂಗಡಣೆಯಲ್ಲಿ ವ್ಯತ್ಯಯ ಉಂಟಾಗುತ್ತಿರುವ ಬಗ್ಗೆ | ಸಭೆಯಲ್ಲಿ ತ್ಯಾಜ್ಯ ವಿಂಗಡಣೆಯಲ್ಲಿ ವ್ಯತ್ಯಯ ಉಂಟಾಗುತ್ತಿರುವ ಬಗ್ಗೆ ಸಾರ್ವಜನಿಕರು ದೂರು ನೀಡಿದ್ದು, ಈ ಬಗ್ಗೆ ಸಭೆಯಲ್ಲಿ ಚರ್ಚಿಸಲಾಗಿ ಘನತ್ಯಾಜ್ಯ ವಿಭಾಗ ವತಿಯಿಂದ ಹಾಜರಿದ್ದ ಕಿರಿಯ ಆರೋಗ್ಯ ಪರಿವೀಕ್ಷಕರು ಕಾಂಪ್ಯಾಕ್ಟರ್ ದುರಸ್ಥಿಗೊಂಡಿರುವುದರಿಂದ ವ್ಯತ್ಯಯ ಉಂಟಾಗಿರುತ್ತದೆ ಎಂದು ತಿಳಿಸಿದ್ದು, ಹಾಗೂ ವ್ಯತ್ಯಯ ಉಂಟಾಗಿದ್ದ ತ್ಯಾಜ್ಯ ವಿಂಗಡಣೆಯಲ್ಲಿ ಸರಿಪಡಿಸಲು ಸೂಕ್ತ ಕ್ರಮವಹಿಸಲಾಗುವುದು ಎಂದು ತಿಳಿಸಿದರು. | ಸಹಾಯಕ ಕಾರ್ಯಪಾಲಕ ಅಭಿಯಂತರರು ಘನತ್ಯಾಜ್ಯ ನಿರ್ವಹಣೆ, ಕಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ಸಂಖ್ಯೆ: 135 |

...ಪ್ರ.ತಿ.ನೋ

| | | | |
|---|---|---|---|
| 2 | ವಾರ್ಡ್ ವ್ಯಾಪ್ತಿಯ ಪ್ರದೇಶಗಳಲ್ಲಿ ಅನಧೀಕೃತವಾಗಿ ಬಯೋ ಮೆಡಿಕಲ್ ತ್ಯಾಜ್ಯವನ್ನು ವಿಲೇವಾರಿ ಮಾಡುತ್ತಿರುವ ಬಗ್ಗೆ | ಸಭೆಯಲ್ಲಿ ವಾರ್ಡ್ ವ್ಯಾಪ್ತಿಯ ಪ್ರದೇಶಗಳಲ್ಲಿ ಅನಧೀಕೃತವಾಗಿ ಬಯೋ ಮೆಡಿಕಲ್ ತ್ಯಾಜ್ಯವನ್ನು ವಿಲೇವಾರಿ ಮಾಡುತ್ತಿರುವ ಬಗ್ಗೆ ಸಾರ್ವಜನಿಕರು ದೂರು ನೀಡಿದ್ದು, ಈ ಬಗ್ಗೆ ಹಿರಿಯ ಆರೋಗ್ಯ ಪರಿವೀಕ್ಷಕರಿಗೆ ಪರಿಶೀಲಿಸಿ ಸೂಕ್ತ ಕ್ರಮ ವಹಿಸುವಂತೆ ಸಭೆಯಲ್ಲಿ ಸೂಚಿಸಲಾಯಿತು. | ಆರೋಗ್ಯ ವೈದ್ಯಾಧಿಕಾರಿಗಳು, ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ಸಂಖ್ಯೆ: 135 |
| 3 | ಪಾದರಾಯನಪುರ ಮುಖ್ಯರಸ್ತೆಯಲ್ಲಿ ಪಾರ್ಕಿಂಗ್ ಬಗ್ಗೆ. | ಈ ಬಗ್ಗೆ ಸಭೆಯಲ್ಲಿ ಚರ್ಚಿಸಿ ಪಾದರಾಯನಪುರ ಮುಖ್ಯಸ್ತೆಯಲ್ಲಿ ವಾಹನಗಳ ಪಾರ್ಕಿಂಗ್ ನ್ನು ಸಮ ಬೆಸ ಮಾದರಿಯಲ್ಲಿ ಅಳವಡಿಸಲು ಪೊಲೀಸ್ ಸಂಚಾರಿ ಇಲಾಖೆಗೆ ಪತ್ರ ಬರೆದು ಈ ಬಗ್ಗೆ ಅಗತ್ಯ ಕ್ರಮ ಕೈಗೊಳ್ಳುವಂತೆ ತಿಳಿಸಲು ಸೂಚಿಸಲಾಯಿತು. | ಸಹಾಯಕ ಕಾರ್ಯಪಾಲಕ ಅಭಿಯಂತರರು ಜೆಜೆಆರ್‌ನಗರ ಉಪವಿಭಾಗ, ಸಹಾಯಕ ಅಭಿಯಂತರರು ವಾರ್ಡ್:135, ಪೊಲೀಸ್ ಸಂಚಾರಿ ವಿಭಾಗ |
| 4 | ವಾರ್ಡ್ ವ್ಯಾಪ್ತಿಯಲ್ಲಿ ಅನಧೀಕೃತವಾಗಿ ಜೈವಿಕ ತ್ಯಾಜ್ಯವನ್ನು ವಿಲೇವಾರಿ ಮಾಡುತ್ತಿರುವ ಬಗೆ | ಸಭೆಯಲ್ಲಿ ವಾರ್ಡ್ ವ್ಯಾಪ್ತಿಯಲ್ಲಿ ಅನಧೀಕೃತವಾಗಿ ಜೈವಿಕ ತ್ಯಾಜ್ಯವನ್ನು ವಿಲೇವಾರಿ ಮಾಡುತ್ತಿರುವ ಬಗ್ಗೆ ಸಾರ್ವಜನಿಕರು ದೂರು ನೀಡಿದ್ದು, ಈ ಬಗ್ಗೆ ಸಭೆಯಲ್ಲಿ ಚರ್ಚಿಸಿ ಘನತ್ಯಾಜ್ಯ ವಿಭಾಗದ ಅಧಿಕಾರಿಗೆ ಸೂಕ್ತ ಕ್ರಮಕೈಗೊಳ್ಳುವಂತೆ ಪತ್ರ ಬರೆಯಲು ನಿರ್ದೇಶಿಸಲಾಯಿತು. | ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣೆ, ಕಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ಸಂಖ್ಯೆ: 135 |
| 5 | 13ನೇ ಕ್ರಾಸ್ ಅರಫತ್‌ನಗರದಲ್ಲಿ ಬೋರ್‌ವೆಲ್ ದುರಸ್ಥಿಗೊಳಿಸುವ ಬಗ್ಗೆ | ಸಭೆಯಲ್ಲಿ 13ನೇ ಕ್ರಾಸ್ ಅರಫತ್‌ನಗರದಲ್ಲಿ ಬೋರ್‌ವೆಲ್ ದುರಸ್ಥಿಗೊಂಡಿರುವುದರಿಂದ ನೀರಿನ ಅಭಾವ ಹೆಚ್ಚಾಗಿರುವ ಬಗ್ಗೆ ದೂರು ನೀಡಿರುವ ಹಿನ್ನಲೆಯಲ್ಲಿ ಪರಿಶೀಲಿಸಿ ಸೂಕ್ತ ಕ್ರಮಕೂಗೊಳ್ಳುವಂತೆ ನಿರ್ದೇಶಿಸಲಾಯಿತು. | ಸಹಾಯಕ ಕಾರ್ಯಪಾಲಕ ಅಭಿಯಂತರರು ಜೆಜೆಆರ್‌ನಗರ ಉಪವಿಭಾಗ, ಸಹಾಯಕ ಅಭಿಯಂತರರು ವಾರ್ಡ್:135 |
| 6 | ಅರಫತ್‌ನಗರ ಪ್ರದೇಶಗಳಲ್ಲಿ ಅಪರಾಧ ಚಟುವಟಿಕೆಗಳು ಹೆಚ್ಚಾಗುತ್ತಿರುವ ಬಗ್ಗೆ | ಸಭೆಯಲ್ಲಿ ಅರಫತ್‌ನಗರ ಪ್ರದೇಶಗಳಲ್ಲಿ ರಾತ್ರಿ ವೇಳೆಯಲ್ಲಿ ಹಲವಾರು ಅಪರಾಧ ಚಟುವಟಿಕೆಗಳು ಹೆಚ್ಚಾಗುತ್ತಿದ್ದು, ರಾತ್ರಿ ವೇಳೆಯಲ್ಲಿ ಸಾರ್ವಜನಿಕರು ಸಂಚರಿಸಲು ಅಸುರಕ್ಷತೆ ಎದುರಾಗಿದ್ದು, ಈ ಬಗ್ಗೆ ಅಧ್ಯಕ್ಷರು ಅಪರಾಧ ಚಟುವಟಿಕೆ ತಡೆಗಟ್ಟಲು ರಾತ್ರಿ ಪಾಳಯದಲ್ಲಿ ಗಸ್ತು ಮಾಡುವ ಚಟುವಟಿಕೆಯನ್ನು ಹೆಚ್ಚಾಗಿಸುವಂತೆ ಪೊಲೀಸ್ ಇಲಾಖೆ ಅಧಿಕಾರಿಗಳಿಗೆ ನಿರ್ದೇಶಿಸಲಾಯಿತು. | ಆರಕ್ಷಕ ನಿರೀಕ್ಷಕರು, ಜೆಜೆಆರ್‌ನಗರ ಪೊಲೀಸ್ ಠಾಣೆ |

ಮೇಲ್ಕಂಡ ಎಲ್ಲಾ ವಿಷಯಗಳೊಂದಿಗೆ ಕಾರ್ಯದರ್ಶಿಗಳು ಸಭೆಯನ್ನು ವಂದನಾರ್ಪಣೆಗಳೊಂದಿಗೆ ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿ ಮತ್ತು
ಸಹಾಯಕ ಅಭಿಯಂತರರು

ಅಧ್ಯಕ್ಷರು &
ನೋಡಲ್ ಅಧಿಕಾರಿ

ಪ್ರತಿಯನ್ನು:-

1. ಮಾನ್ಯ ಆಡಳಿತಾಧಿಕಾರಿ, ಬಿಬಿಎಂಪಿ ರವರ ಅವಗಾಹನೆಗೆ ಸಲ್ಲಿಸಿದೆ.
2. ಮಾನ್ಯ ಆಯುಕ್ತರು, ಬಿಬಿಎಂಪಿ ರವರ ಅವಗಾಹನೆಗೆ ಸಲ್ಲಿಸಿದೆ.
3. ಮಾನ್ಯ ಜಂಟಿ ಆಯುಕ್ತರು (ಪಶ್ಚಿಮ) ಬಿಬಿಎಂಪಿ ರವರ ಅವಗಾಹನೆಗೆ ಸಲ್ಲಿಸಿದೆ.
4. ಮಾನ್ಯ ಮುಖ್ಯ ಅಭಿಯಂತರರು (ಪಶ್ಚಿಮ) ಬಿಬಿಎಂಪಿ ರವರ ಅವಗಾಹನೆಗೆ ಸಲ್ಲಿಸಿದೆ.
5. ನೋಡಲ್ ಅಧಿಕಾರಿ, ವಾರ್ಡ್ ಸಂಖ್ಯೆ: 135 ಪಾದರಾಯನಪುರ ರವರ ಅವಗಾಹನೆಗೆ ಸಲ್ಲಿಸಿದೆ.
6. ಕಾರ್ಯಪಾಲಕ ಅಭಿಯಂತರರು, ಚಾಮರಾಜಪೇಟೆ ವಿಭಾಗ ರವರ ಅವಗಾಹನೆಗೆ ಸಲ್ಲಿಸಿದೆ.
7. ಕಾರ್ಯಪಾಲಕ ಅಭಿಯಂತರರು (ವಿದ್ಯುತ್) ಪಶ್ಚಿಮ ವಿಭಾಗ, ಬಿಬಿಎಂಪಿ ರವರ ಅವಗಾಹನೆಗೆ ಮತ್ತು ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
8. ಆರೋಗ್ಯ ವೈದ್ಯಾಧಿಕಾರಿ, ಚಾಮರಾಜಪೇಟೆ ವಲಯ ರವರ ಅವಗಾಹನೆಗೆ ಮತ್ತು ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
9. ಸಹಾಯಕ ಕಾರ್ಯಪಾಲಕ ಅಭಿಯಂತರರು, ಜೆಜೆಆರ್ ನಗರ ಉಪವಿಭಾಗ ರವರ ಅವಗಾಹನೆಗೆ ಮತ್ತು ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
10. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು & ಸಹಾಯಕ ಅಭಿಯಂತರರು (BWSSB) ಪಾದರಾಯನಪುರ ವಲಯ ರವರ ಅವಗಾಹನೆಗೆ ಮತ್ತು ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
11. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು & ಸಹಾಯಕ ಅಭಿಯಂತರರು (BESCOM) ಪಾದರಾಯನಪುರ ವಲಯ ರವರ ಅವಗಾಹನೆಗೆ ಮತ್ತು ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
12. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಬೃಹತ್ ರಾಜಕಾಲುವೆ (SWD) ಪಶ್ಚಿಮ ವಲಯ ರವರ ಅವಗಾಹನೆಗೆ ಸಲ್ಲಿಸಿದೆ.
13. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (ಘನತ್ಯಾಜ್ಯ ನಿರ್ವಹಣೆ) ಚಾಮರಾಜಪೇಟೆ ವಿಭಾಗ ರವರ ಅವಗಾಹನೆಗೆ ಮತ್ತು ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
14. ಸಹ ಕಂದಾಯ ಅಧಿಕಾರಿ, ಚಾಮರಾಜಪೇಟೆ ಉಪವಿಭಾಗ ರವರ ಅವಗಾಹನೆಗೆ ಮತ್ತು ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
15. ಪೊಲೀಸ್ ಇನ್ಸ್‌ಪೆಕ್ಟರ್, ಕಾನೂನು ಮತ್ತು ಸುವ್ಯವಸ್ಥೆ, ಚಾಮರಾಜಪೇಟೆ/ವಿ.ವಿ.ಪುರಂ/ಸೆಂಟ್ರಲ್ ಪೊಲೀಸ್ ಠಾಣೆ, ಬೆಂಗಳೂರು ಅವಗಾಹನೆಗೆ ಮತ್ತು ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
16. ಆರಕ್ಷಕ ನಿರೀಕ್ಷಕರು, ಜೆ.ಜೆ.ಆರ್. ನಗರ/ ಚಾಮರಾಜಪೇಟೆ ಸಂಚಾರಿ ವಿಭಾಗ, ಬೆಂಗಳೂರು ರವರ ಅವಗಾಹನೆಗೆ ಮತ್ತು ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
17. ವಾರ್ಡ್ ಸಂಖ್ಯೆ: 135 ಪಾದರಾಯನಪುರ ವಾರ್ಡ್ ಕಮಿಟಿ ಸದಸ್ಯರ ಮಾಹಿತಿಗಾಗಿ ಸಲ್ಲಿಸಿದೆ.